ಶಾಲಾ ಕಟ್ಟಡ ದುರಸ್ತಿ & ಶಿಕ್ಷಕರ ಕೊರತೆ

556 (516) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ಹಲವಾರು ಶಾಲಾ ಕೊಠಡಿಗಳು ಮೇಲ್ಚಾವಣಿ ದುರಸ್ಥಿ ಕಾಣದೆ ಮಳೆಗಾಲದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗ್ರಾಮಾಂತರ ಪ್ರದೇಶದಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದಲ್ಲಿ ಕೈಗೊಂಡ ಕ್ರಮಗಳೇನು (ವಿವರ ನೀಡುವುದು);

ಇ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ ಪ್ರಮಾಣ ಎಷ್ಟು ಶಿಕ್ಷಕರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು);

ಈ) ಕಳೆದ ವರ್ಷ ಆರನೇ ತರಗತಿಗೆ ಆಂಗ್ಲ ಮಾಧ್ಯಮ ಬೋಧನೆಗಾಗಿ ಶಾಲೆ ಪ್ರಾರಂಭಿಸಿದ್ದು. ಆಂಗ್ಲ ಮಾಧ್ಯಮದ ಶಿಕ್ಷಕರನ್ನು ನೇಮಕ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು (ವಿವರ ನೀಡುವುದು);

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು ಬಂದಿರುತ್ತದೆ. ಅಗತ್ಯ ಅನುದಾನ ಬಿಡುಗಡೆ ಮಾಡಿದ್ದು, ದುರಸ್ಥಿ ಕಾರ್ಯ ಕೈಗೊಳ್ಳಲಾಗುತ್ತಿದೆ.

ಆ) ಗ್ರಾಮಾಂತರ ಪ್ರದೇಶದಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಸರ್ವ ಶಿಕ್ಷಣ ಅಭಿಯಾನದಲ್ಲಿ 2010–11ರ ನಂತರ ಮಂಜೂರಾದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದಿಂದ ಅನುಮೋದನೆ ದೊರೆತಿದ್ದು, ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗಿರುತ್ತದೆ. ತಾತ್ಕಾಲಿಕವಾಗಿ ಸರ್ಕಾರದ ವತಿಯಿಂದ ಅತಿಥಿ ಶಿಕ್ಷಕರನ್ನು ನೇಮಕಮಾಡಿಕೊಳ್ಳಲು ಆದೇಶ ನೀಡಿದ್ದು, ಈ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.

ಇ)

- ದೊಡ್ಡಬಳ್ಳಾಪುರ ತಾಲ್ಲೂಕಿನ 1147 ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು, 1017 ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದು, 130 ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ.
- ಖಾಲಿ ಇರುವ ಹುದ್ದೆಗಳಿಗೆ ತಾತ್ಕಾಲಿಕವಾಗಿ 17 ಹೆಚ್ಚುವರಿ ಶಿಕ್ಷಕರನ್ನು ಗುರುತಿಸಿ ಅಗತ್ಯ ಶಾಲೆಗಳಿಗೆ ಸ್ಥಳಾಂತರ ಮತ್ತು 22 ಶಿಕ್ಷಕರುಗಳನ್ನು ನಿಯೋಜನೆ ಮಾಡಿ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯಾಗದ ರೀತಿಯಲ್ಲಿ ವ್ಯವಸ್ಥೆ ಮಾಡಲಾಗಿದೆ.

ಈ) ಆಂಗ್ಲ ಮಾಧ್ಯಮ ವಿಭಾಗಗಳಿಗೆ ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡಲು ಶಿಕ್ಷಕರಿಗೆ ರೀಜನಲ್ ಇನ್‌ಸಿಟ್ಯೂಟ್ ಆಫ್ ಇಂಗ್ಲೀಷ ಮತ್ತು ಬ್ರಿಟೀಷ್ ಕೌನ್ಸಿಲ್ ವತಿಯಿಂದ ತರಬೇತಿ ನೀಡಿ ಆಂಗ್ಲ ಮಾಧ್ಯಮ ತರಗತಿಗಳನ್ನು ನಡೆಸಲಾಗುತ್ತಿದೆ. ಆಂಗ್ಲ ಮಾಧ್ಯಮದ ಶಿಕ್ಷಕರನ್ನು ಪ್ರತ್ಯೇಕವಾಗಿ ನೇಮಕಾತಿ ಮಾಡುತ್ತಿಲ್ಲ.

ಅಂಗನವಾಡಿ ಕಟ್ಟಡ

557 (517) ಶ್ರೀ ನರಸಿಂಹಸ್ವಾಮಿ ಜಿ. (ದೊಡ್ಡಬಳ್ಳಾಪುರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮಾಂತರ ಪ್ರದೇಶದಲ್ಲಿ ಬಹಳಷ್ಟು ಕಡೆ ಸ್ವಂತ ಅಂಗನವಾಡಿ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡಗಳು ಇಲ್ಲದೆ ಹೊರಗಡೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಅಪೌಷ್ಟಿಕ ಮಕ್ಕಳು ಹಾಗೂ ಗರ್ಭಿಣಿ ಸ್ತ್ರೀಯರ ಆಹಾರ ಪೂರೈಕೆಯಲ್ಲಿ ಕೆಲವು ಲೋಪದೋಷಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;